## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರವನ್ನು ಬಲಪಡಿಸಲು ಮಂಜೂರಾದ ವಿಪತ್ತು ನಿರ್ವಹಣಾ ಪರಿಣಿತರ ಹುದ್ದೆಗಳನ್ನು 2024-25 ನೇ ಸಾಲಿನಲ್ಲಿ ಮುಂದುವರೆಸುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಕಂಇ 02 ಇಟಿಸಿ 2022, ದಿ:31.01.2023.
2. ರಾಜ್ಯ ಕಾರ್ಯಕಾರಿ ಸಮಿತಿ ಸಭೆಯ ನಡವಳಿ ದಿ: 12.03.2024.
3. ಮುಖ್ಯ ಚುನಾವಣಾಧಿಕಾರಿ ಕರ್ನಾಟಕ ರವರ ಪತ್ರ ಸಂಖ್ಯೆ: ಸಿ.ಆ.ಸು.ಇ 57 ಎಂಸಿಸಿ 2024, ದಿನಾಂಕ:16/04/2024.
4. ಸರ್ಕಾರದ ಜಂಟಿ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ ಇವರ ಅನಧಿಕೃತ ಟಿಪ್ಪಣಿ ಸಂಖ್ಯೆ: CS/17/SCM/2024, ದಿ:17.04.2024.

* * * * *

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿನ ಆದೇಶದನುಸಾರ ರಾಜ್ಯ ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರಗಳನ್ನು ಬಲಪಡಿಸಲು ಪ್ರತಿ ಜಿಲ್ಲೆಗೆ ತಲಾ ಒಬ್ಬರಂತೆ ಜಿಲ್ಲಾ ವಿಪತ್ತು ನಿರ್ವಹಣಾ ಪರಿಣಿತರ ಹುದ್ದೆಗಳನ್ನು ಹಾಗೂ ರಾಜ್ಯ ಮಟ್ಟದಲ್ಲಿ 3 ರಾಜ್ಯ ವಿಪತ್ತು ನಿರ್ವಹಣಾ ಪರಿಣಿತರ ಹುದ್ದೆಗಳನ್ನು ದಿನಾಂಕ: 01/04/2023 ರಿಂದ ಮುಂದಿನ ಒಂದು ವರ್ಷದ ಅವಧಿಗೆ ಮುಂದುವರಿಸಲಾಗಿದ್ದು, ಈ ಅವಧಿಯು ದಿನಾಂಕ:31/03/2024ಕ್ಕೆ ಅಂತ್ಯಗೊಂಡಿರುವುದರಿಂದ ಹಾಗೂ 2023ನೇ ಸಾಲಿನ ನೈರುತ್ಯ ಮುಂಗಾರು ಹಂಗಾಮಿನಲ್ಲಿ ಮಳೆಯ ವೈಫಲ್ಯದಿಂದ ರಾಜ್ಯದ 223 ತಾಲ್ಲೂಕುಗಳನ್ನು ಬರಪೀಡಿತ ತಾಲ್ಲೂಕುಗಳೆಂದು ಘೋಷಿಸಿದ್ದು, ತುರ್ತಾಗಿ ಪರಿಹಾರ ಕಾರ್ಯಗಳನ್ನು ಕೈಗೆತ್ತಿಕೊಳ್ಳಲು ಜಿಲ್ಲಾಡಳಿತಕ್ಕೆ ಸದರಿಯವರುಗಳ ಸೇವೆಯು ಅವಶ್ಯಕತೆ ಇರುವುದರಿಂದ, ಸದರಿ ಹುದ್ದೆಗಳನ್ನು ಮುಂದುವರಿಸುವ ಅವಶ್ಯಕತೆ ಇರುವ ಕಾರಣ ದಿನಾಂಕ: 12.03.2024 ರಂದು ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯ ಕಾರ್ಯಕಾರಿ ಸಮಿತಿ ಸಭೆಯಲ್ಲಿ, ಸದರಿ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ದಿನಾಂಕ:01/04/2024ರಿಂದ ಜಾರಿಗೆ ಬರುವಂತೆ ಮುಂದಿನ 1 ವರ್ಷದ ಅವಧಿಗೆ ಮುಂದುವರೆಸಲು ಮೇಲೆ ಓದಲಾದ ಕ್ರಮ ಸಂಖ್ಯೆ (2) ರಂತೆ ತೀರ್ಮಾನಿಸಲಾಗಿದೆ.

ಪ್ರಸ್ತುತ ಲೋಕಸಭೆಗೆ ಸಾರ್ವತ್ರಿಕ ಚುನಾವಣೆಯು ಘೋಷಣೆಯಾಗಿರುವ ಹಿನ್ನೆಲೆಯಲ್ಲಿ ದಿ: 16.03.2024 ರಿಂದ ಮಾದರಿ ಚುನಾವಣಾ ನೀತಿ ಸಂಹಿತೆಯು ಜಾರಿಯಲ್ಲಿರುವುದರಿಂದ ಜಿಲ್ಲಾ ವಿಪತ್ತು ನಿರ್ವಹಣಾ ಪರಿಣಿತರ ಹುದ್ದೆಗಳನ್ನು ಮುಂದುವರೆಸುವ ಬಗ್ಗೆ ಆದೇಶ ಹೊರಡಿಸಲು ಮಾದರಿ ಚುನಾವಣಾ ನೀತಿ ಸಂಹಿತೆಯಿಂದ ಚುನಾವಣಾ ಆಯೋಗದಿಂದ ವಿನಾಯಿತಿ ಪಡೆಯಲು ದಿನಾಂಕ:15/04/2024ರಂದು,

ಸರ್ಕಾರದ ಮುಖ್ಯ ಕಾರ್ಯದರ್ಶಿರವರ ಅಧ್ಯಕ್ಷತೆಯಲ್ಲಿ ರಚಿಸಿರುವ ಸ್ಕ್ರೀನಿಂಗ್ ಕಮಿಟಿಯ ಮುಂದೆ ಪ್ರಸ್ತಾವನೆ ಮಂಡಿಸಲಾಗಿ, ಕೇಂದ್ರ ಚುನಾವಣಾ ಆಯೋಗಕ್ಕೆ ವಿನಾಯಿತಿಗಾಗಿ ಶಿಫಾರಸ್ಸು ಮಾಡಲಾಗಿ ಮೇಲೆ ಓದಲಾದ (3)ರ ಪತ್ರದಲ್ಲಿ ಮುಖ್ಯ ಚುನಾವಣಾಧಿಕಾರಿ ಕರ್ನಾಟಕ ರವರು ಜಿಲ್ಲಾ ವಿಪತ್ತು ನಿರ್ವಹಣಾ ಪರಿಣಿತರ ಹುದ್ದೆಗಳನ್ನು ಒಂದು ವರ್ಷದವರೆಗೆ ಮುಂದುವರಿಸಲು ಸಹಮತಿಸಿರುವುದಾಗಿ, ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿನ ಅನಧಿಕೃತ ಟಿಪ್ಪಣಿಯಲ್ಲಿ ತಿಳಿಸಲಾಗಿರುತ್ತದೆ. ಆದುದರಿಂದ, 31 ಜಿಲ್ಲಾ ವಿಪತ್ತು ನಿರ್ವಹಣಾ ಪರಿಣಿತರ ಹುದ್ದೆಗಳನ್ನು ಒಂದು ದಿನದ ಮಟ್ಟಿಗೆ Service Break ನೀಡಿ, ದಿನಾಂಕ:02/04/2024ರಿಂದ 31/05/2025ರವರೆವಿಗೆ ಗುತ್ತಿಗೆ ಆಧಾರದ ಮೇಲೆ ಮುಂದುವರಿಸಲು ಸರ್ಕಾರವು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಕಂಇ 154 ಟಿಎನ್ಆರ್ 2024;</u>**
**<u>ಬೆಂಗಳೂರು, ದಿನಾಂಕ: 19.04.2024.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳ ವಿಪತ್ತು ನಿರ್ವಹಣಾ ಪ್ರಾಧಿಕಾರಗಳನ್ನು ಬಲಗೊಳಿಸಲು ಪ್ರತಿ ಜಿಲ್ಲೆಗೆ ತಲಾ ಒಂದರಂತೆ 31 ಗುತ್ತಿಗೆ ಆಧಾರದ ಮೇಲಿನ ಜಿಲ್ಲಾ ವಿಪತ್ತು ನಿರ್ವಹಣಾ ಪರಿಣಿತರ ಹುದ್ದೆಗಳನ್ನು, ಒಂದು ದಿನದ Service Break ನೀಡಿ, ದಿನಾಂಕ: 02.04.2024 ರಿಂದ 31.03.2025 ರವರೆಗೆ ಮುಂದುವರೆಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಎಸ್.ಆರ್. ಶಿವಶಂಕರ್)**
ಸರ್ಕಾರದ ಉಪ ಕಾರ್ಯದರ್ಶಿ
ಕಂದಾಯ ಇಲಾಖೆ
(ವಿಪತ್ತು ನಿರ್ವಹಣೆ, ನೋಂ&ಮು)

**ಗೆ:**

1. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ, ಪಿ.ಬಿ.ನಂ. 5329/5369 ಪಾರ್ಕ್ ಹೌಸ್ ರಸ್ತೆ, ಬೆಂಗಳೂರು.
2. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
3. ಜಂಟಿ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (B&R), ವಿಧಾನಸೌಧ ಬೆಂಗಳೂರು.
4. ಜಂಟಿ ನಿರ್ದೇಶಕರು, ಖಜಾನೆ ಆಯುಕ್ತಾಲಯ, KPCL, ಹಸಿರು ಕಟ್ಟಡ, ಅರಮನೆ ರಸ್ತೆ, ಬೆಂಗಳೂರು.
5. ಎಲ್ಲಾ ಜಿಲ್ಲೆಯ ಜಿಲ್ಲಾ ಖಜಾನಾಧಿಕಾರಿಗಳು.
6. ಪ್ರಾದೇಶಿಕ ಆಯುಕ್ತರು, ಬೆಳಗಾವಿ, ದಾರವಾಡ, ಮೈಸೂರು ಮತ್ತು ಬೆಂಗಳೂರು ವಿಭಾಗಗಳು.

**ಪ್ರತಿ**,

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ,

3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಕಂದಾಯ ಇಲಾಖೆ,(ವಿ.ನಿ), ಬಹುಮಹಡಿ ಕಟ್ಟಡ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ವೆಚ್ಚ, ವಿಧಾನ ಸೌಧ, ಬೆಂಗಳೂರು.
5. ಆಯುಕ್ತರು, ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ, ಇವರ ಆಪ್ತ ಸಹಾಯಕರು, ಬೆಂಗಳೂರು.
6. ಸರ್ಕಾರದ ಉಪ ಕಾರ್ಯದರ್ಶಿಗಳು, ಕಂದಾಯ ಇಲಾಖೆ (ವಿ.ನಿ). ಬಹುಮಹಡಿ ಕಟ್ಟಡ, ಬೆಂಗಳೂರು.
7. ಕಂದಾಯ ಇಲಾಖೆ (ವಿ.ನಿ), ಲೆಕ್ಕ ಪತ್ರ ಶಾಖೆ,
8. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪತಿ.